## 8. ಸುಪ್ರೀಂಕೋರ್ಟ್ ಮೆಟ್ಟಿಲೇರಿದ ರಾಜಸ್ಥಾನ ರಾಜಕೀಯ ಬಿಕ್ಕಟ್ಟು

ರಾಜಸ್ಥಾನದ ರಾಜಕೀಯ ಬಿಕ್ಕಟ್ಟು ಸುಪ್ರೀಂಕೋರ್ಟ್ ಅಂಗಳ ತಲುಪಿದೆ. ಸಚಿನ್ ಪೈಲಟ್ ಬಣದವರು ಅನರ್ಹತೆಯ ನೋಟಿಸ್ ಪ್ರಶ್ನಿಸಿದ ಅರ್ಜಿ ಸಂಬಂಧ ಯಾವುದೇ ತೀರ್ಪು ನೀಡದಂತೆ ರಾಜಸ್ಥಾನ ಹೈಕೋರ್ಟ್‌ಗೆ ಸೂಚಿಸಬೇಕೆಂದು ಕೋರಿ ಸ್ಪೀಕರ್ ಸಿ.ಪಿ.ಜೋಶಿ ಸುಪ್ರೀಂಕೋರ್ಟ್ ಮೊರೆಹೋಗಿದ್ದಾರೆ. ಈ ಅರ್ಜಿ ಬಗ್ಗೆ ತೀರ್ಮಾನ ಕೈಗೊಳ್ಳುವ ಮುನ್ನ ತಮ್ಮ ವಾದವನ್ನೂ ಆಲಿಸಬೇಕು ಎಂದು ಪೈಲಟ್ ಬಣ ಕೇವಿಯಟ್ ಅರ್ಜಿ ಸಲ್ಲಿಸಿದೆ. ಈ ಅರ್ಜಿಗಳ ವಿಚಾರಣೆಯನ್ನು ನ್ಯಾಯಮೂರ್ತಿ ಅರುಣ್ ಮಿಶ್ರಾ ಕೈಗೆತ್ತಿಕೊಳ್ಳಲಿದ್ದಾರೆ. ಶಾಸಕರ ಅನರ್ಹತೆ ನಿರ್ಧರಿಸುವ ಹಕ್ಕು ಸ್ಪೀಕರ್‌ಗೆ ಮಾತ್ರವಿದೆ ಎಂದು ಸುಪ್ರೀಂ ಈ ಹಿಂದೆ ಹಲವು ಪ್ರಕರಣಗಳಲ್ಲಿ ಹೇಳಿರುವುದರಿಂದ ಕುತೂಹಲ ಮೂಡಿದೆ.

ಸಚಿನ್ ಪೈಲಟ್ ಬಣದ ಶಾಸಕರು ಅನರ್ಹತೆಯ ನೋಟಿಸ್ ಪ್ರಶ್ನಿಸಿ ಸಲ್ಲಿಸಿರುವ ಅರ್ಜಿ ಸಂಬಂಧ ಯಾವುದೇ ತೀರ್ಪು ನೀಡದಂತೆ ರಾಜಸ್ಥಾನ ಹೈಕೋರ್ಟ್‌ಗೆ ಸೂಚಿಸಬೇಕು ಎಂದು ಸ್ಪೀಕರ್ ಸಿ.ಪಿ.ಜೋಶಿ ಸುಪ್ರೀಂಕೋರ್ಟ್‌ಗೆ ಮನವಿ ಮಾಡಿದ್ದಾರೆ. ಈ ಬಗ್ಗೆ ತೀರ್ಮಾನ ಕೈಗೊಳ್ಳುವ ಮುನ್ನ ತಮ್ಮ ವಾದವನ್ನೂ ಆಲಿಸಬೇಕು ಎಂದು ಪೈಲಟ್ ಬಣ ಕೇವಿಯಟ್ ಸಲ್ಲಿಸಿದೆ. ಈ ಅರ್ಜಿಗಳ ವಿಚಾರಣೆ ನಡೆಯಲಿದೆ. ಪೈಲಟ್ ಮತ್ತು 18 ಶಾಸಕರ ಅರ್ಜಿ ಕುರಿತು ವಿಚಾರಣೆ ನಡೆಸಿದ್ದ ಹೈಕೋರ್ಟ್‌ನ ವಿಭಾಗೀಯ ಪೀಠ, ತೀರ್ಪು ಕಾಯ್ದಿರಿಸಿತ್ತು. ಅಲ್ಲಿಯವರೆಗೆ ಯಾವುದೇ ಕ್ರಮ ಕೈಗೊಳ್ಳದಂತೆ ಸ್ಪೀಕರ್‌ಗೆ ಸೂಚಿಸಿತ್ತು. ಇದರಿಂದ ಸಾಂವಿಧಾನಿಕ ಹುದ್ದೆಯ ಕರ್ತವ್ಯ ನಿರ್ವಹಣೆಗೆ ಅಡ್ಡಿಯಾಗಿದೆ ಎಂದು ಸ್ಪೀಕರ್ ಜೋಶಿ ಸುಪ್ರೀಂಕೋರ್ಟ್‌ಗೆ ಅರ್ಜಿ ಸಲ್ಲಿಸಿದ್ದರೆ. ಅವರ ಪರ ವಕೀಲ ಕಪಿಲ್ ಸಿಬಲ್ ವಾದ ಮಂಡಿಸಲಿದ್ದಾರೆ. ಪೈಲಟ್ ಬಣದ ಪರ ಮುಕುಲ್ ರೋಹಟಗಿ ವಕಾಲತ್ತು ವಹಿಸಿದ್ದಾರೆ.

**ಹಿನ್ನೆಲೆ ಏನು:** ಮುಖ್ಯಮಂತ್ರಿ ಅಶೋಕ್ ಗೆಹ್ಲೋಟ್ ವಿರುದ್ಧ ಬಂಡೆದ್ದಿರುವ ಸಚಿನ್ ಪೈಲಟ್ ಮತ್ತು ಅವರ ಬೆಂಬಲಿಗ 18 ಶಾಸಕರಿಗೆ ವಿಪ್ ನೀಡಲಾಗಿದ್ದರೂ, ಕಾಂಗ್ರೆಸ್ ಶಾಸಕಾಂಗ ಪಕ್ಷದ ಸಭೆಗೆ ಅವರು ಗೈರಾಗಿದ್ದರು. ಅವರ ವಿರುದ್ಧ ಪಕ್ಷಾಂತರ ನಿಷೇಧ ಕಾಯ್ದೆ ಅನ್ವಯ ಕ್ರಮ ಜರುಗಿಸಬೇಕು ಎಂದು ಕಾಂಗ್ರೆಸ್‌ನ ಮುಖ್ಯ ಸಚೇತಕ ಸ್ಪೀಕರ್‌ಗೆ ದೂರು ನೀಡಿದ್ದರು. ಇದರ ಅನ್ವಯ ಪೈಲಟ್ ಬಣದವರಿಗೆ ಸ್ಪೀಕರ್ ನೋಟಿಸ್ ನೀಡಿದ್ದರು. ಇದನ್ನು ಪ್ರಶ್ನಿಸಿ ಪೈಲಟ್ ಮತ್ತು ಅವರ ಬೆಂಬಲಿಗರು ಹೈಕೋರ್ಟ್ ಮೆಟ್ಟಿಲೇರಿದ್ದರು.

**ಫೋನ್ ಟ್ಯಾಪಿಂಗ್‌ಗೆ ಅನುಮತಿ ನೀಡಿರಲಿಲ್ಲ:** ರಾಜ್ಯದಲ್ಲಿ ದೂರವಾಣಿ ಕದ್ದಾಲಿಕೆಗೆ (ಫೋನ್ ಟ್ಯಾಪಿಂಗ್) ಅನುಮತಿ ನೀಡಿಲ್ಲ ಎಂದು ರಾಜಸ್ಥಾನ ಸರ್ಕಾರ ಕೇಂದ್ರ ಗೃಹ ಸಚಿವಾಲಯಕ್ಕೆ ತಿಳಿಸಿದೆ. ರಾಜಸ್ಥಾನದಲ್ಲಿ ರಾಜಕೀಯ ವಿಪ್ಲವ ಸೃಷ್ಟಿಸಿರುವ ದೂರವಾಣಿ ಕದ್ದಾಲಿಕೆ ಪ್ರಕರಣದಲ್ಲಿ ಕೇಂದ್ರ ಸಚಿವ ಗಜೇಂದ್ರ ಸಿಂಗ್ ಶೆಖಾವತ್ ವಿರುದ್ಧ ಪ್ರಕರಣ ದಾಖಲಾಗಿರುವ ಹಿನ್ನೆಲೆಯಲ್ಲಿ ಈ ಕುರಿತು ವರದಿ ನೀಡುವಂತೆ ರಾಜಸ್ಥಾನದ ಸರ್ಕಾರದ ಮುಖ್ಯ ಕಾರ್ಯದರ್ಶಿಗೆ ಗೃಹ ಸಚಿವಾಲಯ ಸೂಚಿಸಿತ್ತು. ಕಾಂಗ್ರೆಸ್ ಶಾಸಕರನ್ನು ಸೆಳೆಯಲು ಆಮಿಷ ಒಡ್ಡಿರುವ ಆಡಿಯೋಗಳು ಇತ್ತೀಚೆಗೆ ಬಹಿರಂಗಗೊಂಡಿದ್ದವು.

ಆಧಾರ:ವಿಜಯವಾಣಿ, ದಿನಾಂಕ:23.07.2020